# Vijaya Karnataka, dated 11-03-2022, Page No. 09, State.



### ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ 21ನೇ ಘಟಿಕೋತ್ಸವ | ಪರಿಶ್ರಮದ ಓದಿಗೆ ಕರೆ

# ಕೃತಕ ಬುದ್ಧಿಮತ್ತೆ ಬಳಕೆಯಿಂದ ಪರಿಣಾಮಕಾರಿ ಚಿಕಿತ್ಸೆ

■ **ವಿಕ ಸುದ್ದಿಲೋಕ** ಬೆಳಗಾವಿ

ವಿಶ್ವದ ನಾನಾ ದೇಶಗಳಲ್ಲಿ ಕರ್ನಾಟಕದ ತಾಂತ್ರಿಕ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡುತ್ತಿದ್ದಾರೆ. ಜಗತ್ತಿನ ಅತ್ಯುತ್ತಮ ಸ್ಟಾರ್ಟ್ ಅಪ್ ಕಂಪನಿಗಳಲ್ಲಿ ಭಾರತೀಯ ಯುವಕರೇ ಹೆಚ್ಚಿದ್ದಾರೆ. ದೇಶದ ಯುವ ಸಮೂಹ ಭಾರತವನ್ನು 'ವಿಶ್ವಗುರು'ವನ್ನಾಗಿಸುವ ಕಾಲ ದೂರವಿಲ್ಲ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ವಿಶ್ವಾಸ ವ್ಯಕ್ತಪಡಿಸಿದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ 21ನೇ ಘಟಿಕೋತ್ಸವದಲ್ಲಿ ಅವರು ಮಾತನಾಡಿದರು.

''ನವ ಭಾರತ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಿದ ಡಾ. ಎಂ.ವಿಶ್ವೇಶ್ವರಯ್ಯ ಅವರ ಹೆಸರಿನಲ್ಲಿ ಪದವಿ ಪಡೆಯುತ್ತಿರುವುದು ಗೌರವದ ವಿಷಯ. ಕನ್ನಡ ಭಾಷೆಯಲ್ಲಿ ಎಂಜಿನಿಯರಿಂಗ್ ಅಧ್ಯಯನಕ್ಕೆ ಅವಕಾಶ ಕೊಟ್ಟಿರುವುದು ಶ್ಲಾಘನೀಯ. ಆರ್ಟಿಫಿಶಿಯಲ್ ಇಂಟಲಿಜೆನ್ಸ್ ತಾಂತ್ರಿಕತೆಯನ್ನು ವೈದ್ಯಕೀಯ ಕ್ಷೇತ್ರದಲ್ಲೂ ಅಳವಡಿಸಿಕೊಳ್ಳುವ ಮೂಲಕ ಇನ್ನಷ್ಟು ಪರಿಣಾಮಕಾರಿ ಚಿಕಿತ್ಸಾ ವ್ಯವಸ್ಥೆ ಜಾರಿಗೆ ಶ್ರಮಿಸಬೇಕು'' ಎಂದು ಅವರು ಕರೆ ನೀಡಿದರು.

**ಕೌಶಲ ವೃದ್ಧಿಗೆ ಉಪಕ್ರಮ:** ಕುಲಾಧಿಪತಿಯೂ ಆಗಿರುವ ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವತ್ಥ ನಾರಾಯಣ, ''ವಿಟಿಯುವನ್ನು 'ಯೂನಿವರ್ಸಿಟಿ ಆಫ್ ಎಮಿನೆನ್ಸ್' ಆಗಿ ರೂಪಿಸಲು ಕ್ರಿಯಾಯೋಜನೆ ರೂಪಿಸಲಾಗುತ್ತಿದೆ. ರಾಜ್ಯದ 30 ಎಂಜಿನಿಯರಿಂಗ್ ಕಾಲೇಜುಗಳನ್ನು 'ಸೂಪರ್-30' ಯೋಜನೆಯಡಿ ಜಾಗತಿಕ ಗುಣಮಟ್ಟದ ಸಂಸ್ಥೆಗಳನ್ನಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಇವೆಲ್ಲವೂ 'ಸರ್ವರಿಗೂ ಉದ್ಯೋಗ' ಯೋಜನೆಗೆ ಪೂರಕ'' ಎಂದು ಅವರು ಹೇಳಿದರು.

**ದೇಶದ ಪ್ರಗತಿಗೆ ಕೈ ಜೋಡಿಸಿ:** ''ನವ ಪದವೀಧರರು ದೇಶದ ಪ್ರಗತಿಯ ಭಾಗವಾಗಬೇಕು. ಉದ್ಯೋಗ ಶೋಧಕರಾಗದೆ ಉದ್ಯೋಗ ಸೃಷ್ಟಿಸುವವರಾಗಬೇಕು'' ಎಂದು ಅಧ್ಯಕ್ಷತೆ ವಹಿಸಿದ್ದ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಕರೆ ನೀಡಿದರು.

ಕುಲಪತಿ ಡಾ. ಕರಿಸಿದ್ದಪ್ಪ ಪ್ರಾಸ್ತಾವಿಕ ಮಾತನಾಡಿದರು. ಸಂಸದೆ ಮಂಗಲ ಅಂಗಡಿ, ವಿಟಿಯು ಕುಲಸಚಿವ ಪ್ರೊ. ಆನಂದ ದೇಶಪಾಂಡೆ, ಪ್ರೊ.ರಂಗಸ್ವಾಮಿ ಹಾಗೂ ವಿದ್ಯಾರ್ಥಿಗಳ ಪಾಲಕರು ಭಾಗವಹಿಸಿದ್ದರು.



ರಾಜ್ಯಪಾಲರಿಂದ ಕ್ರಿಶ್ ಗೋಪಾಲಕೃಷ್ಣನ್ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ.



ಚಿನ್ನದ ಪದಕ ಪಡೆದ ಟಾಪ್ 5 ವಿದ್ಯಾರ್ಥಿಗಳು.

## ಸಾಧಕ ವಿದ್ಯಾರ್ಥಿಗಳಿಗೆ ಚಿನ್ನದ ಉತ್ಸಾಹ

ರಾಯಚೂರಿನ ಎಸ್‌ಎಲ್‌ಎನ್ ಎಂಜಿನಿಯರಿಂಗ್ ಕಾಲೇಜಿನ ಸಿವಿಲ್ ಎಂಜಿನಿಯರಿಂಗ್ ವಿದ್ಯಾರ್ಥಿನಿ ಬುಶ್ರಾ ಮತೀನ್ ಅವರಿಗೆ 16 ಚಿನ್ನದ ಪದಕ ಪ್ರದಾನ ಮಾಡಲಾಯಿತು.

ಬೆಂಗಳೂರು ಬಿಎನ್‌ಎಂ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಇ ಆ್ಯಂಡ್ ಸಿ ವಿಭಾಗದ ವಿದ್ಯಾರ್ಥಿನಿ ಸ್ವಾತಿ ದಯಾನಂದ, ಬೆಳಗಾವಿಯ ಕೆ.ಎಲ್.ಇ. ಸಂಸ್ಥೆಯ ಡಾ. ಎಂ.ಎಸ್.ಶೇಷಗಿರಿ ಎಂಜಿನಿಯರಿಂಗ್ ಕಾಲೇಜಿನ ವಿವೇಕ್ ಭದ್ರಕಾಳಿ, ಬಳ್ಳಾರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಆ್ಯಂಡ್ ಮ್ಯಾನೇಜ್‌ಮೆಂಟ್ ಕಾಲೇಜಿನ ಇ ಆ್ಯಂಡ್ ಇ ವಿಭಾಗದ ವಿದ್ಯಾರ್ಥಿನಿ ಚಂದನಾ ಎಂ. ಅವರಿಗೆ ತಲಾ ಏಳು ಚಿನ್ನದ ಪದಕ ಪ್ರದಾನ ಮಾಡಲಾಯಿತು.



16 ಚಿನ್ನದ ಪದಕ ಪಡೆದ ಬುಶ್ರಾ ಮತೀನ್

ಬೆಂಗಳೂರಿನ ಸಿ.ಎಂ.ಆರ್. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಕಂಪ್ಯೂಟರ್ ಸೈನ್ಸ್ ವಿದ್ಯಾರ್ಥಿನಿ ರಮ್ಯಾ ಟಿ 6 ಚಿನ್ನ ಗಳಿಸಿದ್ದರೆ, ಬೆಂಗಳೂರಿನ ಆರ್.ಎನ್.ಎಸ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಇಲೆಕ್ಟ್ರಾನಿಕ್ಸ್ ಇನಸ್ಟ್ರುಮೆಂಟೇಶನ್ ವಿದ್ಯಾರ್ಥಿನಿ ಪ್ರಜ್ಞಾ ಎನ್., ಶಿವಮೊಗ್ಗದ ಜೆಎನ್‌ಎನ್‌ಸಿಇ ಕಾಲೇಜಿನ ಇನ್ಫಾರ್ಮೇಶನ್ ಸೈನ್ಸ್ ವಿಭಾಗದ ವಿದಾರ್ಥಿನಿ ಪಲ್ಲವಿ, ಬೆಂಗಳೂರಿನ ಆರ್.ಎನ್.ಎಸ್. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಎಂಬಿಎ ವಿದ್ಯಾರ್ಥಿನಿ ತೇಜಸ್ವಿನಿ ಆರ್. ತಲಾ 4 ಚಿನ್ನದ ಪದಕ ಪಡೆದಿದ್ದಾರೆ.

ಬೆಂಗಳೂರಿನ ಆರ್.ಎನ್.ಎಸ್. ಟೆಕ್ನಾಲಜಿ ಕಾಲೇಜಿನ ಎಂಸಿಎ ವಿದ್ಯಾರ್ಥಿನಿ ಅಸ್ವಿತಾ ಎನ್. ಮತ್ತು ದಾವಣಗೆರೆಯ ಯುಬಿಡಿಟಿ ಕಾಲೇಜ್ ಆಫ್ ಎಂಜಿನಿಯರಿಂಗ್ ಕಾಲೇಜಿನ ಎಂ.ಟೆಕ್ ವಿದ್ಯಾರ್ಥಿನಿ ಸವಿತಾ ಎಚ್.ಟಿ. ಅವರಿಗೆ ತಲಾ ಮೂರು ಚಿನ್ನದ ಪದಕ ಪ್ರದಾನ ಮಾಡಲಾಯಿತು. 57,498 ವಿದ್ಯಾರ್ಥಿಗಳಿಗೆ ಎಂಜಿನಿಯರಿಂಗ್ ಪದವಿ ಪ್ರದಾನ ಮಾಡಲಾಯಿತು.

### ಎಸ್‌ಜಿಬಿ ಅಧ್ಯಯನ ಕೇಂದ್ರ

ನೀರಾವರಿ ತಜ್ಞರಾಗಿದ್ದ ಡಾ.ಎಸ್.ಜಿ. ಬಾಳೇಕುಂದ್ರಿ ಅವರ ಕೊಡುಗೆ ಹಿರಿದು. ಸರ್ ಎಂ. ವಿಶ್ವೇಶ್ವರಯ್ಯ ಅವರಂತೆ ಬಾಳೇಕುಂದ್ರಿ ಅವರು ದೂರದೃಷ್ಟಿಯ ಎಂಜಿನಿಯರ್ ಆಗಿದ್ದರು. ಅವರ ಹೆಸರಿನಲ್ಲಿ ಅಧ್ಯಯನ ಕೇಂದ್ರ ಸ್ಥಾಪನೆ ಮಾಡಬೇಕೆನ್ನುವ ಬೇಡಿಕೆ ಬಹಳ ದಿನಗಳಿಂದ ಇದೆ. ಹೀಗಾಗಿ ಇಷ್ಟರಲ್ಲೇ ವಿಟಿಯುನಲ್ಲಿ ಅಧ್ಯಯನ ಕೇಂದ್ರ ಆರಂಭಿಸಲಾಗುವುದು'' ಎಂದು ಸಚಿವ ಡಾ. ಅಶ್ವತ್ಥ್ ನಾರಾಯಣ ಘೋಷಣೆ ಮಾಡಿದರು.

### ಡಾಕ್ಟರ್ ಆಫ್ ಸೈನ್ಸ್ ಗೌರವ

ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಅತ್ಯುನ್ನತ ಸೇವೆ ಸಲ್ಲಿಸಿದ ಪದ್ಮ ಭೂಷಣ, ಬೆಂಗಳೂರಿನ ಆಕ್ಸಿಲೋರ್ ವೆಂಚರ್ಸ್ ಅಧ್ಯಕ್ಷ ಹಾಗೂ ಇನ್ಫೋಸಿಸ್ ಸಹ-ಸಂಸ್ಥಾಪಕ ಕ್ರಿಶ್ ಗೋಪಾಲಕೃಷ್ಣನ್ ಅವರಿಗೆ ರಾಜ್ಯಪಾಲರು ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದರು.

ಅತೀ ಹೆಚ್ಚು ಚಿನ್ನದ ಪದಕ ಪಡೆದ ಕನ್ನಡತಿ ನಾನು ಎಂಬುದೇ ದೊಡ್ಡ ಗೌರವ. ಯುಪಿಎಸ್ಸಿ ಮೂಲಕ ಸಾರ್ವಜನಿಕ ಸೇವೆ ಮಾಡುವ ಗುರಿ ಇದೆ.
**-ಬುಶ್ರಾ ಮತೀನ್** ರಾಯಚೂರು

ಸದ್ಯ ಕೆಲಸ ಮಾಡುತ್ತಿರುವ ನೆಟ್‌ವರ್ಕಿಂಗ್ ಕಂಪನಿಯಲ್ಲಿ ಕೆಲಸ ಮಾಡುತ್ತಲೇ ಉನ್ನತ ಶಿಕ್ಷಣ ಮುಂದುವರಿಸುತ್ತೇನೆ.
**-ಸ್ವಾತಿ ದಯಾನಂದ** ಬೆಂಗಳೂರು

ಕನ್ನಡ ಮಾಧ್ಯಮದ ವಿದ್ಯಾರ್ಥಿಗಳೂ ಸಾಧನೆ ಮಾಡಬಹುದು. ಹಾಗಾಗಿ ಕನ್ನಡ ಮಾಧ್ಯಮದ ಬಗ್ಗೆ ಕೀಳರಿಮೆ ಬೇಡವೇ ಬೇಡ. ಯುಪಿಎಸ್ಸಿ ಪರೀಕ್ಷೆಗೆ ಸಿದ್ಧತೆ ಆರಂಭಿಸಿದ್ದೇನೆ.
**-ವಿವೇಕ ಭದ್ರಕಾಳಿ** ಬೆಳಗಾವಿ

ಅಂದಿನ ಪಾಠ ಅಂದೇ ಓದಿ ಮನದಟ್ಟು ಮಾಡಿಕೊಳ್ಳುವ ರೂಢಿ ಇದ್ದರೆ ಎಂಥ ಪರೀಕ್ಷೆಗಳನ್ನೂ ಸುಲಭವಾಗಿ ಪಾಸಾಗಬಹುದು.
**-ಎಂ.ಚಂದನ್** ಬಳ್ಳಾರಿ